ಅಪರ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು ಹಾಗೂ ವಿಶೇಷ
ನ್ಯಾಯಾಧೀಶರ ನ್ಯಾಯಾಲಯ, ಹಾಸನ

ಸ್ಪೆಷಲ್ ಕೇಸ್ ನಂಃ **378/2021**

| | ಚಾಸಾಃ **8** | ಅಸಾಃ **8** |
|---|---|---|
| ಹೆಸರು | ಡಾ. ಸುಜಾತ | |
| ತಂದೆಯ ಹೆಸರು : | ಡಾ. ಪ್ರಸನ್ನ ಹೆಚ್ ಟಿ | |
| ವಯಸ್ಸು: | 49 ವರ್ಷ | |
| ಕೆಲಸಃ | ವೈದ್ಯಾಧಿಕಾರಿ ಜಿಲ್ಲಾ ಆಸ್ಪತ್ರೆ | |
| ವಾಸಸ್ಥಳ | ಹಾಸನ | |

ದಿನಾಂಕಃ **17/03/2026** ರಂದು ಪ್ರಮಾಣವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆ ಃ ಮಾನ್ಯ ಎಸ್‌ಪಿಪಿ ರವರಿಂದ

2019 ಜುಲೈನಿಂದ ಇಲ್ಲಿಯವರೆಗೂ ಜಿಲ್ಲಾ ಆಸ್ಪತ್ರೆ ಹಾಸನದಲ್ಲಿ ವೈದ್ಯಾಧಿಕಾರಿಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದೇನೆ. ದಿ. 19.07.2021 ರಂದು ಮಧ್ಯಾಹ್ನ 3.20 ಗಂಟೆ ಸಮಯದಲ್ಲಿ ಚಾಸಾ-1 ರವರು ಹಲ್ಲೆಯ ಹಿನ್ನಲೆಯಲ್ಲಿ ಆಸ್ಪತ್ರೆಗೆ ಬಂದಿದ್ದು, ಅವರನ್ನು ಪರೀಕ್ಷಿಸಿದಾಗ ಈ ಕೆಳಕಂಡ ಗಾಯಗಳು ಕಂಡು ಬಂದಿರುತ್ತದೆ.

1. ಬೆನ್ನಿನಲ್ಲಿ ಹೊಟ್ಟೆಯ ಭಾಗದಲ್ಲಿ, ಎಡತೊಡೆಯ ಭಾಗದಲ್ಲಿ ನೋವಿನ ಸ್ಥಿತಿ.

ಮೇಲ್ಕಂಡ ಗಾಯಗಳು ಸಾಮಾನ್ಯ ಸ್ವರೂಪದ ಗಾಯಗಳಾಗಿದ್ದು, ಇದಕ್ಕೆ ಸಂಬಂಧಪಟ್ಟ ನಿಪಿ-11 ಪ್ರಮಾಣಪತ್ರವನ್ನು ನೀಡಿದ್ದು, ಸದರಿ ಗಾಯದ ಪ್ರಮಾಣ ಪತ್ರದಲ್ಲಿ ಸಾಕ್ಷಿಯ ಸಹಿಯನ್ನು ನಿಪಿ-11(ಎ) ಎಂದು ಗುರುತಿಸಲಾಗಿದೆ.

ಒಬ್ಬ ವ್ಯಕ್ತಿಗೆ ಇನ್ನೊಬ್ಬ ವ್ಯಕ್ತಿಗೆ ಕೈನಿಂದ ಹೊಡೆದರೆ ಗಟ್ಟಿಯಾದ ವಸ್ತುವಿನಿಂದ ಹೊಡೆದರೆ ಮೇಲ್ಕಂಡ ಗಾಯಗಳು ಆಗುವ ಸಾಧ್ಯತೆ ಇರುತ್ತದೆ.

ಪಾಟೀ ಸವಾಲುಃ ಆರೋಪಿತರ ಪರ ವಕೀಲರಿಂದಃ

ಮೇಲ್ಕಂಡ ಗಾಯಗಳು ಒಬ್ಬ ವ್ಯಕ್ತಿ ಗಟ್ಟಿಯಾದ ನೆಲದ ಮೇಲೆ ಬಿದ್ದರೆ ಆಗುವ ಸಾಧ್ಯತೆ ಇರುತ್ತದೆ ಎಂದರೆ ಸರಿ.

ಮರು ವಿಚಾರಣೆ ಇಲ್ಲ

**(**ನನ್ನ ಉಕ್ತಲೇಖನಕ್ಕೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು**)**

ಓ ಹೇ ಕೇ ಸ ಇ ಎ ಪ್ರ.,

ಅಪರ ಸೆಷನ್ಸ್ ಮತ್ತು ವಿಶೇಷ
ನ್ಯಾಯಾಧೀಶರು, ಹಾಸನ